**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ತರೀಕೆರೆ.**

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆ 684/2023**

ಫಿರ್ಯಾದಿ ಃ ರಾಜ್ಯದ ಪರವಾಗಿ ಲಿಂಗದಹಳ್ಳಿ ಪೊಲೀಸರು

- ವಿರುದ್ಧ -

ಆರೋಪಿ/ತರುಃ

ಮಂಜುಳ ಕೋಂ ಶ್ರೀನಿವಾಸ, 45 ವರ್ಷ, ಕೂಲಿಕೆಲಸ, ವಾಸ ಃ ನಂದಿಹೊಸಳ್ಳಿ ಗ್ರಾಮ, ಲಿಂಗದಹಳ್ಳಿ ಹೋಬಳಿ, ತರೀಕೆರೆ ತಾಲ್ಲೂಕು

****

-ಃದೋಷಾರೋಪಣೆಃ-

ಶ್ರೀಮತಿ ಉರ್ಮಿಳ.ವಿ ಬಿ.ಎ.ಎಲ್., ಎಲ್.ಎಲ್.ಬಿ., 1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ., ತರೀಕೆರೆ ಆದ ನಾನು ಆರೋಪಿಯಾದ ನಿಮ್ಮ ವಿರುದ್ದ ಮಾಡುವ ದೋಷಾರೋಪಣೆ ಏನೆಂದರೆಃ-

ದಿನಾಂಕ 12.10.2022 ರಂದು ಸಂಜೆ 05.30 ಗಂಟೆ ಸಮಯದಲ್ಲಿ ಲಿಂಗದಹಳ್ಳಿ ಪೊಲೀಸ್ ಠಾಣಾ ಸರಹದ್ದಿನ ನಂದಿಹೊಸಳ್ಳಿ ಗ್ರಾಮದಲ್ಲಿ ಆರೋಪಿಯಾದ ನೀವು ಶ್ರೀನಿವಾಸರವರ ಮನೆಯ ಮುಂದಿನ ರಸ್ತೆಯಲ್ಲಿ ಯಾವುದೇ ಪರವಾನಗಿ ಇಲ್ಲದೇ ಅಕ್ರಮವಾಗಿ ರೂ.1,230/- ಬೆಲೆ ಬಾಳುವ 90 ಎಂ.ಎಲ್. ನ ಒರಿಜಿನಲ್ ಚಾಯ್ಸ್ ಡೀಲಕ್ಸ್ ವಿಸ್ಕಿಯ 35 ಮದ್ಯ ತುಂಬಿದ ಪೌಚು ಗಳನ್ನು ಒಂದು ಕಪ್ಪು ಬಣ್ಣದ ಪ್ಲಾಸ್ಟಿಕ್ ಕವರಿನಲ್ಲಿ ಇಟ್ಟುಕೊಂಡಿದ್ದು, ಆದಕಾರಣ ಆರೋಪಿಯಾದ ನೀವು ಕರ್ನಾಟಕ ಅಬಕಾರಿ ಕಾಯ್ದೆ ಕಲಂ 32 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ಎರಡನೇಯದಾಗಿ, ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ, ಆರೋಪಿಯಾದ ನೀವು ಶ್ರೀನಿವಾಸರವರ ಮನೆಯ ಮುಂದಿನ ರಸ್ತೆಯಲ್ಲಿ ಯಾವುದೇ ಪರವಾನಗಿ ಇಲ್ಲದೇ ಅಕ್ರಮವಾಗಿ ರೂ.1,230/- ಬೆಲೆ ಬಾಳುವ 90 ಎಂ.ಎಲ್. ನ ಒರಿಜಿನಲ್ ಚಾಯ್ಸ್ ಡೀಲಕ್ಸ್ ವಿಸ್ಕಿಯ 35 ಮದ್ಯ ತುಂಬಿದ ಪೌಚು ಗಳನ್ನು ಒಂದು ಕಪ್ಪು ಬಣ್ಣದ ಪ್ಲಾಸ್ಟಿಕ್ ಕವರಿನಲ್ಲಿ ಮಾರಾಟ ಮಾಡುವ ಉದ್ದೇಶದಿಂದ ಇಟ್ಟುಕೊಂಡಿದ್ದು, ಆದಕಾರಣ ಆರೋಪಿಯಾದ ನೀವು ಕರ್ನಾಟಕ ಅಬಕಾರಿ ಕಾಯ್ದೆ ಕಲಂ 34 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ನೀವು ಸದರಿ ಆರೋಪಗಳ ಮೇಲೆ ಈ ನ್ಯಾಯಾಲಯದಿಂದ ವಿಚಾರಣೆಗೆ ಗುರಿಯಾಗತಕ್ಕುದೆಂದು ನಾನು ಈ ಮೂಲಕ ನಿರ್ದೇಶಿಸುತ್ತೇನೆ.

ದಿನಾಂಕ ಃ 10.02.2026

ಸಹಿ

**(ಉರ್ಮಿಳ.ವಿ)**
**1** ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾ.ದಂ., ತರೀಕೆರೆ.